ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ
ನ್ಯಾಯಾಲಯ, ಹೊನ್ನಾಳಿ

ಸಿ.ಸಿ ನಂಬರ್.**969/2023**

ಪಿರ್ಯಾದುದಾರರು ಃ- ರಾಜ್ಯ – ನ್ಯಾಮತಿ ಪೋಲೀಸ್ ಠಾಣೆ

ವಿರುದ್ಧ

ಆರೋಪಿಃ- ಚೇತನನಾಯ್ಕ ಬಿನ್ ಹನುಮನಾಯ್ಕ,
ವಯಸ್ಸು **32** ವರ್ಷ,
ವಾಸಃ ಹೊಸಜೋಗ ಗ್ರಾಮ,
ನ್ಯಾಮತಿ ತಾಲ್ಲೂಕು, ದಾವಣಗೆರೆ.

ದೋಷಾರೋಪಣೆ

ಶ್ರೀ ಪುಣ್ಯಕೋಟಿ ಎಸ್ ಎನ್., ಬಿ.ಎ., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹೊನ್ನಾಳಿ ಆದ ನಾನು ನಿಮ್ಮ ಮೇಲೆ ಮಾಡುತ್ತಿರುವ ದೋಷಾರೋಪಣೆ ಏನೆಂದರೆಃ

ದಿನಾಂಕ **13.07.2023** ರಂದು ಸಂಜೆ **6.45** ಗಂಟೆ ಸಮಯದಲ್ಲಿ ನ್ಯಾಮತಿ ಪೋಲೀಸ್ ಠಾಣಾ ವ್ಯಾಪ್ತಿಯ ಹೊಸಜೋಗ ಗ್ರಾಮದ ಆರೋಪಿಯಾದ ನೀವು ನಿಮ್ಮ ವಾಸದ ಮನೆಯ ಮುಂಭಾಗದ ಸಾರ್ವಜನಿಕ ರಸ್ತೆಯಲ್ಲಿ ಸರ್ಕಾರದಿಂದ ಯಾವುದೇ ಪರವಾನಿಗೆಯನ್ನು ಪಡೆಯದೇ ಅಕ್ರಮವಾಗಿ ಮಧ್ಯ ಮಾರಾಟ ಮಾಡಿರುತ್ತೀರಿ. ಆ ಮೂಲಕ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.**32** ರಡಿಯಲ್ಲಿ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞೇಯತೆಯಲ್ಲಿ ಮಾಡಿರುತ್ತೀರಿ.

**2.** ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಮದ್ಯದ ಪೌಚ್‌ಗಳನ್ನು ಅಕ್ರಮವಾಗಿ ಹೊಂದುವುದು ಕಾನೂನು ಬಾಹಿರವೆಂದು ತಿಳಿದಿದ್ದರೂ ಸಹ ಓರಿಜಿನಲ್ ಛಾಯ್ಸ್ ವಿಸ್ಕಿಯ **90** ಎಂ.ಎಲ್ ನ **40** ವಿಸ್ಕಿ ಪೌಚ್ ಮದ್ಯವನ್ನು ಮಾರಾಟ ಮಾಡುವ ಉದ್ದೇಶದಿಂದ ಅಕ್ರಮವಾಗಿ ಸಂಗ್ರಹ ಮಾಡಿರುತ್ತೀರಿ. ಆ ಮೂಲಕ ಆರೋಪಿಯಾದ

ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.34 ರಡಿಯಲ್ಲಿ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞೇಯತೆಯಲ್ಲಿ ಮಾಡಿರುತ್ತೀರಿ.

(ಮೇಲ್ಕಂಡ ದೋಷರೋಪಣೆಯನ್ನು ಆರೋಪಿಗೆ ತಿಳಿದ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ತೆರೆದ ನ್ಯಾಯಾಲಯದಲ್ಲಿ ಬರೆದುಕೊಳ್ಳಲಾಯಿತು.)

ಸ್ಥಳ: ಹೊನ್ನಾಳಿ
ದಿನಾಂಕ: 10.10.2024

(ಪುಣ್ಯಕೋಟಿ ಎಸ್ ಎನ್)
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ.,
ಹೊನ್ನಾಳಿ.